**ಅಸಲು ದಾವಾ ಸಂಖ್ಯೆ - 67/2016** ಪಿ.ಡಬ್ಲ್ಯೂ:-1

ದಿನಾಂಕಃ **14-07-2023** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲು :- 2 ನೇ ಪ್ರತಿವಾದಿ ಪರ ವಕೀಲರಿಂದ :-**

ನಾನು ಗೃಹಿಣಿ. ನನ್ನ ತಂದೆಯು ನನಗೆ ದಾವಾ ಸ್ವತ್ತನ್ನು ಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ. ಸದರಿ ಸ್ವತ್ತನ್ನು 1 ನೇ ಪ್ರತಿವಾದಿಯು ತನ್ನ ಹೆಸರಿನಲ್ಲಿ ಕ್ರಯ ಪತ್ರವನ್ನು ನೋಂದಾಯಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತು 1 ನೇ ಪ್ರತಿವಾದಿಯ ಸ್ವಯಾರ್ಜಿತ ಸ್ವತ್ತು ಎಂದರೆ ಸರಿಯಲ್ಲ. ನಾನು ವಾದಪತ್ರದಲ್ಲಿ ಮತ್ತು ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ತಿಳಿಸಿರುವಂತೆ ದಾವಾ ಸ್ವತ್ತನ್ನು ನಾನು ಆಗಲೀ ನನ್ನ ತಂದೆಯಾಗಲೀ 1 ನೇ ಪ್ರತಿವಾದಿಯ ಹೆಸರಿಗೆ ನೋಂದಣಿ ಮಾಡಿಸಿ ಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯು ಸಲ್ಲಿಸಿರುವ ತಕರಾರನ್ನು ನಾನು ಓದಿ ತಿಳಿದುಕೊಂಡಿರುತ್ತೇನೆ. 1 ನೇ ಪ್ರತಿವಾದಿಯ ಮಾಲೀಕತ್ವಕ್ಕೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿ, 2 ನೇ ಪ್ರತಿವಾದಿಯು ದಾವಾ ಸ್ವತ್ತನ್ನು ಅವರಿಂದ ಖರೀದಿಸಿರುತ್ತಾರೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಮೇಲೆ ನನಗೆ ಆಗಲೀ ನನ್ನ ಮಗಳಿಗಾಗಲೀ ಯಾವುದೇ ರೀತಿಯ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ಪ್ರತಿವಾದಿ 4 ಮತ್ತು 5 ರವರಿಗೆ ನೀಡಿದ ತಕರಾರನ್ನು ತಳ್ಳಿ ಹಾಕಿ 2 ನೇ ಪ್ರತಿವಾದಿಯ ಹೆಸರಿಗೆ ಖಾತೆಯನ್ನು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾನು 1 ನೇ ಪ್ರತಿವಾದಿಯನ್ನು ಬಿಟ್ಟು ಹೋಗಿರುತ್ತೇನೆ ಎಂದರೆ ಸರಿಯಲ್ಲ.

2 ನೇ ಪ್ರತಿವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ಈ ಪ್ರಕರಣವನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಪೋಟೋಗಳನ್ನು ಸೃಷ್ಟಿಮಾಡಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಈ ದಾವೆಗೋಸ್ಕರ ಉಳಿದ ದಾಖಲೆಗಳನ್ನು ಸೃಷ್ಟಿಮಾಡಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. 2 ನೇ

ಪ್ರತಿವಾದಿಯ ವಿರುದ್ಧ ದಾವೆಯನ್ನು ಹೂಡಲು ನನಗೆ ಯಾವುದೇ ವ್ಯಾಜ್ಯ ಕಾರಣ ಉದ್ಭವಿಸಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಮೇಲೆ ನನಗೆ ಯಾವುದೇ ರೀತಿಯ ಹಕ್ಕು ಮತ್ತು ಹಿತಾಸಕ್ತಿ ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಎಲ್ಲಾ ವಿಚಾರಗಳು ಸುಳ್ಳಿನಿಂದ ಕೂಡಿವೆ ಎಂದರೆ ಸರಿಯಲ್ಲ. ದಾವಾ ಸ್ವತ್ತನ್ನು 2 ನೇ ಪ್ರತಿವಾದಿಯಿಂದ ಕಬಳಿಸುವ ಉದ್ದೇಶದಿಂದ ಸುಳ್ಳು ದಾವೆಯನ್ನು ಹೂಡಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ:- ಇಲ್ಲ**

**ಸಾ. ಹೇ. ತೆ. ನ್ಯಾ ಬೆ. ಮಾಡಿಸಲಾಯಿತು.**

**ಓ. ಹೇ. ಕೇ. ಸ. ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಹೊನ್ನಾಳಿ.**